*ಈ) ವಿವರಗಳನ್ನು ನೀಡುವುದು?*

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) 2000-2001ನೇ ಸಾಲಿನಲ್ಲಿ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಕೆರೆಯ ಹೊಳೆತ್ತುವ ಕಾರ್ಯ ಕೈಗೊಂಡಿರುವುದಿಲ್ಲ.

ಆ), ಇ) ಮತ್ತು ಈ) ಪ್ರಶ್ನೆ ಉದ್ಭವಿಸುವುದಿಲ್ಲ.

## ಆಡಳಿತಾತ್ಮಕ ನ್ಯಾಯಮಂಡಳಿಗೆ ವಹಿಸಿರುವ ಗೃಹ ಇಲಾಖೆ ಪ್ರಕರಣಗಳು

5050 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಗೃಹ ಇಲಾಖೆಗೆ ಸಂಬಂಧಪಟ್ಟ ಆಡಳಿತ ನ್ಯಾಯ ಮಂಡಳಿಗೆ ವಹಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು?*

*ಆ) ಈ ಬಗ್ಗೆ ಪೋಲೀಸ್ ಇಲಾಖೆಗೆ ಸಂಬಂಧಪಟ್ಟ ಪ್ರಕರಣಗಳ ಸಂಖ್ಯೆ ಎಷ್ಟು?*

*ಇ) ಇವುಗಳ ಕುರಿತಾಗಿ ಎಷ್ಟು ಪ್ರಕರಣಗಳನ್ನು ನಿಕಾಲ್ ಮಾಡಲಾಗಿದೆ?*

*ಈ) ನ್ಯಾಯ ಮಂಡಳಿ ನೀಡಿರುವ ಸಲಹೆ ಮತ್ತು ಸೂಚನೆಗಳೇನು?*

*ಉ) ಇದನ್ನು ಜಾರಿಗೆ ತರಲು ಸರ್ಕಾರ ಯಾವ ಕ್ರಮ ಕೈಗೊಳ್ಳಲು ಉದ್ದೇಶಿಸಿದೆ?*

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :

ಅ) ಯಾವ ಪ್ರಕರಣವನ್ನೂ ವಹಿಸಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

## ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ

5051 - ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ್ (ರೋಣ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ವಿದ್ಯುತ್ ಉತ್ಪಾದನೆಯನ್ನು ಹೆಚ್ಚಿಸಲು ಪ್ರಸ್ತುತ ವರ್ಷ ಸರ್ಕಾರ ಕೈಗೊಂಡ ಕ್ರಮಗಳಾವುವು?*